# ಕರ್ನಾಟಕ ಸರ್ಕಾರದ ನಡವಳಿ

**ವಿಷಯ:** ಶ್ರೀ ಲಕ್ಷ್ಮಣ ಹನಮಂತ ನಾವಿ, ಅಂದಿನ ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಶ್ರೀ ಭಜಂತ್ರಿ ಎಂ.ಎಲ್., ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಶ್ರೀ ಎಸ್.ಹೆಚ್.ಹಾಳಕೇರಿ, ಗ್ರಾಮ ಪಂಚಾಯತಿ ಕಾರ್ಯದರ್ಶಿ, ಶ್ರೀ ಜಯಕುಮಾರ್ ದೇವರನಾವದಗಿ, ಅಂದಿನ ಪಂಚಾಯತಿ ಅಭಿವೃದ್ಧಿ ಅಧಿಕಾರಿ ಮತ್ತು ಶ್ರೀ ಕೆ.ಬಿ.ಶಿವಣಗಿ, ನಿವೃತ್ತ ಪಂಚಾಯತಿ ಅಭಿವೃದ್ಧಿ ಅಧಿಕಾರಿ – ಹರನಾಳ ಗ್ರಾಮ ಪಂಚಾಯತಿ, ಸಿಂಧಗಿ ತಾಲ್ಲೂಕು, ವಿಜಯಪುರ ಜಿಲ್ಲೆ ಇವರುಗಳ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ಕ.ನಾ.ಸೇ.ನಿಯಮಾವಳಿಗಳು 1957 ರ ನಿಯಮ 14ಎ ರಡಿ ಮಾನ್ಯ ಉಪಲೋಕಾಯುಕ್ತರಿಗೆ ವಹಿಸುವ ಬಗ್ಗೆ – ಆದೇಶ.

**ಓದಲಾಗಿದೆ:**

ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು, ಇವರ ಅ.ಸ.ಪ.ಸಂ. Compt/UPLOK/BGM/3247/2014/PP, ದಿನಾಂಕ: 17.04.2017

**ಪ್ರಸ್ತಾವನೆ:**

ಮೇಲೆ ಓದಲಾದ (1) ರಲ್ಲಿ ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಇವರ ಪತ್ರದ ಸಂಗಡ ಕಳುಹಿಸಿರುವ ಮಾನ್ಯ ಉಪಲೋಕಾಯುಕ್ತರು-1 ರವರು ದಿನಾಂಕ: 24.03.2017 ರಂದು ಕರ್ನಾಟಕ ಲೋಕಾಯುಕ್ತ ಕಾಯಿದೆ 1984ರ ಕಲಂ 12(3)ರ ಅನ್ವಯ ಸಲ್ಲಿಸಿರುವ ವರದಿಯಲ್ಲಿ ಶ್ರೀ ನಿಂಗನಗೌಡ ಶಾಸಪ್ಪ ಬಿರಾದಾರ, ಹರನಾಳ ಗ್ರಾಮ, ಸಿಂಧಗಿ ತಾಲ್ಲೂಕು, ವಿಜಯಪುರ ಜಿಲ್ಲೆ (ಇನ್ನು ಮುಂದೆ ದೂರುದಾರರು ಎಂದು ಕರೆಯಲ್ಪಡುತ್ತಾರೆ) ಇವರು, 1) ಶ್ರೀ ಮಹಿಬೂಬ ಹುಸೇನಿ ಮುದಗಲ್, ಅಂದಿನ ಅಧ್ಯಕ್ಷರು, 2) ಶ್ರೀ ಕೆ.ಬಿ.ಶಿವಣಗಿ, ನಿವೃತ್ತ ಪಂಚಾಯತಿ ಅಭಿವೃದ್ಧಿ ಅಧಿಕಾರಿ 3) ಶ್ರೀ ಲಕ್ಷ್ಮಣ ಹನಮಂತ ನಾವಿ, ಅಂದಿನ ಪಂಚಾಯತಿ ಅಭಿವೃದ್ಧಿ ಅಧಿಕಾರಿ, 4) ಶ್ರೀ ಭಜಂತ್ರಿ ಎಂ.ಎಲ್., ಪಂಚಾಯತಿ ಅಭಿವೃದ್ಧಿ ಅಧಿಕಾರಿ, 5) ಶ್ರೀಮತಿ ಕಮಲಾಬಾಯಿ ಕೋಂ ಶಂಕರಗೌಡ ಕಲಕೇರಿ, ಅದಿನ ಅಧ್ಯಕ್ಷರು, 6) ಶ್ರೀ ಎಸ್.ಹೆಚ್.ಹಾಳಕೇರಿ, ಗ್ರಾಮ ಪಂಚಾಯತಿ ಕಾರ್ಯದರ್ಶಿ ಮತ್ತು 7) ಶ್ರೀ ಜಯಕುಮಾರ್ ದೇವರನಾವದಗಿ, ಅಂದಿನ ಪಂಚಾಯತಿ ಅಭಿವೃದ್ಧಿ ಅಧಿಕಾರಿ – ಹರನಾಳ ಗ್ರಾಮ ಪಂಚಾಯತಿ, ಸಿಂಧಗಿ ತಾಲ್ಲೂಕು, ವಿಜಯಪುರ ಜಿಲ್ಲೆ (ಇನ್ನು ಮುಂದೆ ಕ್ರಮವಾಗಿ ಎದುರುದಾರರು 1 ರಿಂದ 7 ಎಂದು ಕರೆಯಲ್ಪಡುತ್ತಾರೆ) ಇವರುಗಳ ವಿರುದ್ಧ ದೂರು ಸಲ್ಲಿಸಿ, 2010-11 ರಿಂದ 2014-15 ರ ಅವಧಿಯಲ್ಲಿ ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆ ಅಡಿಯಲ್ಲಿ ನಕಲಿ ಉದ್ಯೋಗ ಚೀಟಿಗಳನ್ನು ಸೃಷ್ಟಿಸಿ, ರೂ.1,17,33,601/- ಗಳ ಹಣ ದುರುಪಯೋಗಪಡಿಸಿಕೊಂಡಿರುವುದಾಗಿ ಆರೋಪಿಸಿರುತ್ತಾರೆ. ಸದರಿ ದೂರಿನ ಆಧಾರದ ಮೇಲೆ ಕರ್ನಾಟಕ ಲೋಕಾಯುಕ್ತ ಕಾಯ್ದೆ 1984 ರ ಕಲಂ 9 ರಡಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ ತನಿಖೆಗೆ ಆದೇಶಿಸಲಾಗಿರುತ್ತದೆ.

ಈ ಪ್ರಕರಣದ ಸಂಬಂಧ ಪೋಲಿಸ್ ಅಧೀಕ್ಷಕರು, ಕರ್ನಾಟಕ ಲೋಕಾಯುಕ್ತ, ಬೆಳಗಾವಿ ಜಿಲ್ಲೆ ಇವರು ಕರ್ನಾಟಕ ಲೋಕಾಯುಕ್ತ ಕಾಯ್ದೆ, 1984 ರ ಕಲಂ 15(3) ರಡಿ ತನಿಖೆ ನಡೆಸಿದ್ದು, ತನಿಖಾ ವರದಿಯ ಸಾರಾಂಶ ಕೆಳಗಿನಂತಿರುತ್ತದೆ.

| ಕ್ರ.ಸಂ. | ವಿವರ | ಅವ್ಯವಹಾರ (ರೂ.ಗಳಲ್ಲಿ) |
|---|---|---|
| 1 | ಸರ್ಕಾರಿ ನೌಕರ ಪರಸ್ಥಳ ಒಂದೇ ಕುಟುಂಬಕ್ಕೆ ಅನೇಕ ಜಾಬ್‌ಕಾರ್ಡ್ | 3,64,060/- |
| 2 | ಒಂದೇ ವ್ಯಕ್ತಿಗೆ ಎರಡಕ್ಕಿಂತ ಹೆಚ್ಚು ಜಾಬ್‌ಕಾರ್ಡ್ | 6,92,185/- |
| 3 | 2010-11 ರಿಂದ 2014-15 ರವರೆಗೆ ಎನ್.ಎಂ.ಆರ್. ಖರ್ಚಿನ ಯಾದಿ | 56,69,952/- |
| 4 | 2010-11 ರಿಂದ 2014-15 ರವರೆಗೆ ಪಂಡ್ಸ್ ಖರ್ಚಿನ ಯಾದಿ | 50,07,404/- |
| | **ಒಟ್ಟು** | **1,17,33,601/-** |

ಎದುರುದಾರರು ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯಡಿಯಲ್ಲಿ ಹರನಾಳ ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ನಕಲಿ ಜಾಬ್‌ಕಾರ್ಡ್ ಸೃಷ್ಟಿಸಿ, ರೂ.1,17,33,601/- ಗಳನ್ನು ದುರುಪಯೋಗಪಡಿಸಿಕೊಂಡಿರುವುದು ಸಾಬೀತಾಗಿರುವುದಾಗಿ ತನಿಖಾಧಿಕಾರಿಗಳು ವರದಿ ಮಾಡಿರುವ ಹಿನ್ನೆಲೆಯಲ್ಲಿ, ಎದುರುದಾರ 2, 3, 4, 6 ಮತ್ತು 7 ಗಳು ವಿರುದ್ಧ ಕರ್ನಾಟಕ ನಾಗರೀಕ ಸೇವಾ (ನಡತೆ) ನಿಯಮಗಳು, 1966ರ ನಿಯಮ 3(1) ರ ಅನ್ವಯ ಶಿಸ್ತು ಕ್ರಮಕ್ಕೆ ಬಾಧ್ಯರಾಗಿದ್ದಾರೆಂದು ತಿಳಿಸುತ್ತಾ ಸದರಿಯವರ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ, ಮತ್ತು ಮೇಲ್ಮನವಿ) ನಿಯಮಗಳು 1957ರ ನಿಯಮ 14-ಎ ರಡಿ ಮಾನ್ಯ ಉಪಲೋಕಾಯುಕ್ತರಿಗೆ ವಹಿಸಲು ಶಿಫಾರಸ್ಸು ಮಾಡಿರುತ್ತಾರೆ.

ಸರ್ಕಾರವು ಮಾನ್ಯ ಉಪಲೋಕಾಯುಕ್ತರ ವರದಿಯನ್ನು ಪರಿಶೀಲಿಸಿ, ಈ ಪ್ರಕರಣದಲ್ಲಿ ಭಾಗಿಯಾಗಿರುವ ನೌಕರರ ವಿರುದ್ಧ ವಿಚಾರಣೆ ನಡೆಸುವುದು ಸೂಕ್ತವೆಂದು ಭಾವಿಸಿ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು, 1957ರ ನಿಯಮ 14-ಎ ರನ್ವಯ ಪ್ರಕರಣವನ್ನು ಮಾನ್ಯ ಉಪಲೋಕಾಯುಕ್ತರಿಗೆ ವಹಿಸುವ ಸಲುವಾಗಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 336 ಗ್ರಾಪಂಕಾ 2016, ಬೆಂಗಳೂರು, ದಿನಾಂಕ: 09.05.2017**

ಪ್ರಸ್ತಾವನೆಯಲ್ಲಿ ವಿವರಿಸಲಾದ ಅಂಶಗಳ ಹಿನ್ನೆಲೆಯಲ್ಲಿ, 3) ಶ್ರೀ ಲಕ್ಷ್ಮಣ ಹನಮಂತ ನಾವಿ, ಅಂದಿನ ಪಂಚಾಯತಿ ಅಭಿವೃದ್ಧಿ ಅಧಿಕಾರಿ, 4) ಶ್ರೀ ಭಜಂತ್ರಿ ಎಂ.ಎಲ್., ಪಂಚಾಯತಿ ಅಭಿವೃದ್ಧಿ ಅಧಿಕಾರಿ, 6) ಶ್ರೀ ಎಸ್.ಹೆಚ್.ಹಾಳಕೇರಿ, ಗ್ರಾಮ ಪಂಚಾಯತಿ ಕಾರ್ಯದರ್ಶಿ ಮತ್ತು 7) ಶ್ರೀ ಜಯಕುಮಾರ್ ದೇವರನಾವದಗಿ, ಅಂದಿನ ಪಂಚಾಯತಿ ಅಭಿವೃದ್ಧಿ ಅಧಿಕಾರಿ – ಹರನಾಳ ಗ್ರಾಮ ಪಂಚಾಯತಿ, ಸಿಂಧಗಿ ತಾಲ್ಲೂಕು, ವಿಜಯಪುರ ಜಿಲ್ಲೆ ಇವರುಗಳ ವಿರುದ್ಧ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957 ರ ನಿಯಮ 11ರ ಅನುಸಾರ ಇಲಾಖಾ ವಿಚಾರಣೆ ನಡೆಸಲು ಸದರಿ ನಿಯಮಗಳ ನಿಯಮ 14-ಎ ಅಡಿ ಮತ್ತು 2) ಶ್ರೀ ಕೆ.ಬಿ.ಶಿವಣಗಿ, ನಿವೃತ್ತ ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಹರನಾಳ ಗ್ರಾಮ ಪಂಚಾಯತಿ, ಸಿಂಧಗಿ ತಾಲ್ಲೂಕು, ವಿಜಯಪುರ ಜಿಲ್ಲೆ ಇವರು ನಿವೃತ್ತರಾಗಿರುವುದರಿಂದ ಇವರುಗಳ ವಿರುದ್ಧ ಕರ್ನಾಟಕ ನಾಗರೀಕ ಸೇವಾ ನಿಯಮಗಳು 1957 ರ ನಿಯಮ 214(2)(ಬಿ)(1) ರಡಿ, ಸದರಿ ನಿಯಮಾವಳಿಗಳ ನಿಯಮ 11 ರ ಅನುಸಾರ ಇಲಾಖಾ ವಿಚಾರಣೆ ನಡೆಸಲು ಮಾನ್ಯ ಉಪಲೋಕಾಯುಕ್ತರಿಗೆ ವಹಿಸಿದೆ.

ಈ ಪ್ರಕರಣದಲ್ಲಿ ಸರ್ಕಾರವು ಶಿಸ್ತು ಪ್ರಾಧಿಕಾರವಾಗಿದ್ದು, ಆಪಾದಿತರಿಗೆ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957ರ ನಿಯಮ-8 ಅಥವಾ ಕರ್ನಾಟಕ ನಾಗರೀಕ ಸೇವಾ ನಿಯಮಗಳು 1957ರ ರ ನಿಯಮ 214 ರ ಅಡಿ ಸೂಚಿತವಾದ ಯಾವುದಾದರೊಂದು ಅಥವಾ ಹೆಚ್ಚಿನ ದಂಡನೆ ವಿಧಿಸಲು ಸಕ್ಷಮ ಪ್ರಾಧಿಕಾರವಾಗಿರುತ್ತದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

**(ಟಿ.ವಿ.ಅರುಣ್ ಕುಮಾರ್)**
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಗೆ,

1) ಮಹಾಲೇಖಪಾಲರು, ಕರ್ನಾಟಕ ಬೆಂಗಳೂರು.
2) ಮಾನ್ಯ ಉಪಲೋಕಾಯುಕ್ತ ರವರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
3) ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
   (ಮೇಲೆ ಓದಲಾದ ಪತ್ರದೊಂದಿಗೆ ಸಲ್ಲಿಸಲಾಗಿದ್ದ ಮೂಲ ಲಗತ್ತುಗಳು ಹಾಗೂ ಉಪಲೋಕಾಯುಕ್ತ ವರದಿಯನ್ನು ಇದರೊಂದಿಗೆ ಲಗತ್ತಿಸಿ ಹಿಂದಿರುಗಿಸಿದೆ.)
4) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ವಿಜಯಪುರ ಜಿಲ್ಲಾ ಪಂಚಾಯತಿ, ವಿಜಯಪುರ.
5) ಕಾರ್ಯನಿರ್ವಾಹಕ ಅಧಿಕಾರಿ, ಸಿಂಧಗಿ ತಾಲ್ಲೂಕು ಪಂಚಾಯತಿ, ಸಿಂಧಗಿ, ವಿಜಯಪುರ ಜಿಲ್ಲೆ, (ಸಂಬಂಧಿಸಿದ ನೌಕರರಿಗೆ ಆದೇಶದ ಪ್ರತಿಯನ್ನು ತಲುಪಿಸಿ ಸರ್ಕಾರಕ್ಕೆ ಸ್ವೀಕೃತಿ ನೀಡುವಂತೆ ಕೋರಿದೆ.)
6) ಶ್ರೀ ಕೆ.ಬಿ.ಶಿವಣಗಿ, ನಿವೃತ್ತ ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಹರನಾಳ ಗ್ರಾಮ ಪಂಚಾಯತಿ, ಸಿಂಧಗಿ ತಾಲ್ಲೂಕು, ವಿಜಯಪುರ ಜಿಲ್ಲೆ.
7) ಶ್ರೀ ಲಕ್ಷ್ಮಣ ಹನಮಂತ ನಾವಿ, ಅಂದಿನ ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಹರನಾಳ ಗ್ರಾಮ ಪಂಚಾಯತಿ, ಸಿಂಧಗಿ ತಾಲ್ಲೂಕು, ವಿಜಯಪುರ ಜಿಲ್ಲೆ.
8) ಶ್ರೀ ಭಜಂತ್ರಿ ಎಂ.ಎಲ್., ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಹರನಾಳ ಗ್ರಾಮ ಪಂಚಾಯತಿ, ಸಿಂಧಗಿ ತಾಲ್ಲೂಕು, ವಿಜಯಪುರ ಜಿಲ್ಲೆ.
9) ಶ್ರೀ ಎಸ್.ಹೆಚ್.ಹಾಳಕೇರಿ, ಗ್ರಾಮ ಪಂಚಾಯತಿ ಕಾರ್ಯದರ್ಶಿ, ಹರನಾಳ ಗ್ರಾಮ ಪಂಚಾಯತಿ, ಸಿಂಧಗಿ ತಾಲ್ಲೂಕು, ವಿಜಯಪುರ ಜಿಲ್ಲೆ.
10) ಶ್ರೀ ಜಯಕುಮಾರ್ ದೇವರನಾವದಗಿ, ಅಂದಿನ ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಹರನಾಳ ಗ್ರಾಮ ಪಂಚಾಯತಿ, ಸಿಂಧಗಿ ತಾಲ್ಲೂಕು, ವಿಜಯಪುರ ಜಿಲ್ಲೆ
11) ಗಣಕಕೋಶ – ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು.
12) ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.